ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 6/2/2021

# 9ಕ್ಕೆ ವಿಧಾನ ಪರಿಷತ್ ಸಭಾಪತಿ ಚುನಾವಣೆ

**ಹೊರಟ್ಟಿ ಆಯ್ಕೆ ಬಹುತೇಕ ಖಚಿತ ▪ 10ರವರೆಗೆ ನಡೆಯಲಿದೆ ಕಲಾಪ**

6/2/21

**ಬೆಂಗಳೂರು:** ತೀವ್ರ ಕುತೂಹಲ ಕೆರಳಿಸಿದ್ದ ರಾಜ್ಯ ವಿಧಾನಪರಿಷತ್ ಸಭಾಪತಿ ಚುನಾವಣೆಗೆ ಫೆ.9ರಂದು ದಿನಾಂಕ ನಿಗದಿಯಾಗಿದೆ.

ಫೆ.8ರಂದು ನಾಮಪತ್ರ ಸಲ್ಲಿಕೆಗೆ ಅವಕಾಶ ಇದ್ದು 9ರಂದು ಚುನಾವಣೆ ನಡೆಯಲಿದೆ. ಜೆಡಿಎಸ್‌ನ ಬಸವರಾಜ ಹೊರಟ್ಟಿ ಬಿಜೆಪಿ-ಜೆಡಿಎಸ್ ಬೆಂಬಲದೊಂದಿಗೆ ಸಭಾಪತಿಯಾಗಿ ಆಯ್ಕೆಯಾಗುವುದು ಬಹುತೇಕ ಖಚಿತವಾಗಿದೆ.

ಈ ಮಧ್ಯೆ, ಪರಿಷತ್ ಸಭಾಪತಿ ಚುನಾವಣೆ ಹಿನ್ನೆಲೆಯಲ್ಲಿ ಪರಿಷತ್ ಕಲಾಪವನ್ನು ಫೆ.10 ರವರೆಗೆ ಮುಂದುವರಿಸಲು ರಾಜ್ಯ ಸಚಿವ ಸಂಪುಟ ಸಭೆಯಲ್ಲಿ ಶುಕ್ರವಾರ ತೀರ್ಮಾನಿಸಲಾಯಿತು. ಸಂಪುಟ ಸಭೆಯ ತೀರ್ಮಾನವನ್ನು ರಾಜ್ಯಪಾಲರಿಗೆ ಕಳುಹಿಸಲು ನಿರ್ಧರಿಸಲಾಯಿತು. ಇದರ ಬೆನ್ನಲ್ಲೇ ಪರಿಷತ್‌ನ ಕಲಾಪ ಸಲಹಾ ಸಮಿತಿ ಸಭೆ ಸೇರಿ ಫೆ.10 ರವರೆಗೆ ಕಲಾಪ ಮುಂದುವರಿಸಲು ನಿರ್ಧರಿಸಲಾಯಿತು.

ಈ ಮಧ್ಯೆ, ಸಭಾಪತಿ ಪ್ರತಾಪಚಂದ್ರಶೆಟ್ಟಿ ಅವರು ಸಲ್ಲಿಸಿದ್ದ ರಾಜೀನಾಮೆ ಪತ್ರ ಅಂಗೀಕರಿಸಿ ಪರಿಷತ್ ಕಲಾಪ ಮುಂದುವರಿಕೆ ಹಾಗೂ ಸಭಾಪತಿ ಚುನಾವಣೆ ನಿಗದಿಗೆ ರಾಜ್ಯಪಾಲರು ಅನುಮತಿ ನೀಡಿದರು.

## ನಾನೇ ಅಭ್ಯರ್ಥಿ

ಪರಿಷತ್ ಕಲಾಪ ಸಲಹಾ ಸಮಿತಿ ಸಭೆಯ ನಂತರ ಮಾತನಾಡಿದ ಜೆಡಿಎಸ್‌ನ



ಬಸವರಾಜ ಹೊರಟ್ಟಿ ನಮ್ಮ ಪಕ್ಷದಿಂದ ನನ್ನನ್ನು ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಾರೆ. ಬಹುತೇಕ ನಾನೇ ಅಭ್ಯರ್ಥಿ ಎಂದು ಹೇಳಿದರು. ಗೋಹತ್ಯೆ ನಿಷೇಧ ವಿಧೇಯಕ ವಿಚಾರದಲ್ಲಿ ಜೆಡಿಎಸ್ ನಿಲುವು ಏನು ಎಂಬ ಪ್ರಶ್ನೆಗೆ, ನಮ್ಮ ಪಕ್ಷದ ವರಿಷ್ಠರು ಆ ಬಗ್ಗೆ ತೀರ್ಮಾನ ಕೈಗೊಳ್ಳುತ್ತಾರೆ ಎಂದು ತಿಳಿಸಿದರು.